# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತನೆಯ ಅಧಿವೇಶನ**

**ಕಾರ್ಯಕಲಾಪಗಳ ಪಟ್ಟಿ**

**ಗುರುವಾರ, ದಿನಾಂಕ: 19ನೇ ಮಾರ್ಚ್, 2020**

**(ಸಮಯ: ಬೆಳಗ್ಗೆ: 10.30 ಗಂಟೆಗೆ)**

* * *

## 01. ವರದಿಯನ್ನೊಪ್ಪಿಸುವುದು

**ಶ್ರೀ ಐವನ್ ಡಿ' ಸೋಜಾ** (ಸದಸ್ಯರು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ) ಅವರು **ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ** ಮೊದಲನೇ ವರದಿಯನ್ನು ಒಪ್ಪಿಸುವುದು.

## 02. ಭಾರತ ಸಂವಿಧಾನದ ಮೇಲಿನ ವಿಶೇಷ ಚರ್ಚೆ (ಎಂಟನೇ ದಿನ)

## 03. ಪ್ರಶ್ನೋತ್ತರ

| | | | |
|---|---|---|---|
| ಅ. | ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು | : | ಹದಿಮೂರನೆಯ ಪಟ್ಟಿ |
| ಆ. | **ತಡೆಹಿಡಿಯಲಾದ ಪ್ರಶ್ನೆ:**<br>8ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ತಿಪ್ಪಣ್ಣ ಕಮಕನೂರ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 110 (713) | : | ಮಾನ್ಯ ಜಲಸಂಪನ್ಮೂಲ ಸಚಿವರು |
| ಇ. | ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು | : | ಹದಿಮೂರನೆಯ ಪಟ್ಟಿ |

## 04. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

**01. ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕ, 2020**

**ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು)** ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ **"ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕ"** ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

...2..

**02. ಕರ್ನಾಟಕ ಉನ್ನತ ಶೈಕ್ಷಣಿಕ ಸಂಸ್ಥೆಗಳಲ್ಲಿ ಶಿಕ್ಷಕರ ವೇತನ ಮತ್ತು ನಿವೃತ್ತಿ ವೇತನದ ನಿಯಂತ್ರಣ ವಿಧೇಯಕ, 2020**

**ಡಾ. ಅಶ್ವಥ್ ನಾರಾಯಣ್ ಸಿ.ಎನ್.** (ಮಾನ್ಯ ಉಪ ಮುಖ್ಯಮಂತ್ರಿ ಮತ್ತು ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ **"ಕರ್ನಾಟಕ ಉನ್ನತ ಶೈಕ್ಷಣಿಕ ಸಂಸ್ಥೆಗಳಲ್ಲಿ ಶಿಕ್ಷಕರ ವೇತನ ಮತ್ತು ನಿವೃತ್ತಿ ವೇತನದ ನಿಯಂತ್ರಣ ವಿಧೇಯಕ"** ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 05. ವಿತ್ತೀಯ ಕಾರ್ಯಕಲಾಪ

2020-21ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ

## 06. ಗಮನ ಸೆಳೆಯುವ ಸೂಚನೆಗಳು

ಅ) **ಶ್ರೀ ಮರಿತಿಬ್ಬೇಗೌಡ, ಶ್ರೀ ಪುಟ್ಟಣ್ಣ ಹಾಗೂ ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ** ಅವರುಗಳು ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿ ಶಿವಾಜಿನಗರದಿಂದ ನಾಗವಾರದವರೆಗೆ ಕೈಗೊಂಡಿರುವ ಮೆಟ್ರೋ 2ನೇ ಹಂತದ ಕಾಮಗಾರಿಯಲ್ಲಿ ಮಾರ್ಗ ನಿರ್ಮಾಣಕ್ಕಾಗಿ ಭೂಸ್ವಾಧೀನ ಪಡಿಸಿಕೊಂಡಿದ್ದು, ಭೂ ಮಾಲೀಕರುಗಳಿಗೆ ಪರಿಹಾರ ನೀಡದಿರುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರ ಗಮನ ಸೆಳೆಯುವುದು.

## 07. ನಿಯಮ 330ರ ಮೇರೆಗೆ

ಅ) **ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಎಸ್.ಆರ್. ಪಾಟೀಲ್ ಹಾಗೂ ಶ್ರೀಯುತರುಗಳಾದ ಕೆ.ಟಿ. ಶ್ರೀಕಂಠೇಗೌಡ, ಐವನ್ ಡಿ'ಸೋಜಾ, ಆರ್.ಬಿ. ತಿಮ್ಮಾಪೂರ, ಪಿ.ಆರ್. ರಮೇಶ್** ಹಾಗೂ ಇತರರು ರಾಜ್ಯದಲ್ಲಿ ದಿನನಿತ್ಯ ಉಪಯೋಗಿಸುವ ಆಹಾರ ಪದಾರ್ಥಗಳಲ್ಲಿ ರಾಸಾಯನಿಕ ಮಿಶ್ರಿತ ಕಲಬೆರಕೆ ಹೆಚ್ಚಾಗಿ ಜನಸಾಮಾನ್ಯರ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತಿರುವ ಬಗ್ಗೆ ಪ್ರಸ್ತಾಪಿಸುವುದು.

...3..

ಆ) **ಶ್ರೀ ಎಂ.ಸಿ ವೇಣುಗೋಪಾಲ್** ಅವರು ಬೆಂಗಳೂರಿನ ಜಯನಗರದ 4ನೇ ಬಡಾವಣೆಯಲ್ಲಿರುವ ವಕ್ಫ್ ಮಂಡಳಿಗೆ ಸೇರಿರುವ ಸರ್ವೆ ನಂ 74/1, 75/2 ಮತ್ತು 75/3 ಜಾಗವನ್ನು ನಗರಾಭಿವೃದ್ಧಿ ಇಲಾಖೆಯವರು ವಶಪಡಿಸಿಕೊಂಡಿರುವ ಬಗ್ಗೆ ಪ್ರಸ್ತಾಪಿಸುವುದು.

ಇ) **ಶ್ರೀಯುತರುಗಳಾದ ಕೆ.ಟಿ ಶ್ರೀಕಂಠೇಗೌಡ, ಬಸವರಾಜ ಶಿವಲಿಂಗಪ್ಪ ಹೊರಟ್ಟಿ, ಡಾ: ವೈ. ಎ. ನಾರಾಯಣಸ್ವಾಮಿ, ಆಯನೂರು ಮಂಜುನಾಥ, ಶರಣಪ್ಪ ಮಟ್ಟೂರ, ಡಾ: ಚಂದ್ರಶೇಖರ ಬಿ. ಪಾಟೀಲ್ ಹಾಗೂ ಇತರರು** ವೃತ್ತಿ ಶಿಕ್ಷಣ ಇಲಾಖೆಯಲ್ಲಿ ಸೇವೆ ಸಲ್ಲಿಸಿದ ಶಿಕ್ಷಕರನ್ನು ಇತರೆ ಇಲಾಖೆಗಳಲ್ಲಿ ವಿಲೀನಗೊಳಿಸಲಾಗಿದ್ದು ಅವರ ಖಾಯಂ ಪೂರ್ವ ಸೇವಾ ಅವಧಿಯನ್ನು ಪರಿಗಣಿಸಿ ನಿಶ್ಚಿತ ಪಿಂಚಣಿ ನೀಡುವ ಸಂಬಂಧ ವಿಧೇಯಕಕ್ಕೆ ತಿದ್ದುಪಡಿ ತರುವ ಬಗ್ಗೆ ಪ್ರಸ್ತಾಪಿಸುವುದು.

## ೦೪. ಅರ್ಧ ಗಂಟೆ ಕಾಲಾವಧಿ ಚರ್ಚೆ

ಅ) ಕರ್ನಾಟಕ ಮತ್ತು ಹೈದ್ರಾಬಾದ್ ಕರ್ನಾಟಕ ಭಾಗದಿಂದ ನಿಯಮ ಬಾಹಿರವಾಗಿ ಮಾಡಲಾಗಿರುವ ಕಾಲೇಜು ಶಿಕ್ಷಣ ಇಲಾಖೆಯ ಉಪನ್ಯಾಸಕರ ನಿಯೋಜನೆಗೆ ಸಂಬಂಧಿಸಿದಂತೆ ದಿನಾಂಕ:೦9.೦3.2೦2೦ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:72 (558)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

ಆ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಆಸ್ಪತ್ರೆ ಮತ್ತು ಸಿಬ್ಬಂದಿಗಳ ಸಂಖ್ಯೆಗಳಿಗೆ ಸಂಬಂಧಿಸಿದಂತೆ ದಿನಾಂಕ:೦9.೦3.2೦2೦ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:71 (540)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಹೆಚ್.ಎಂ. ರಮೇಶಗೌಡ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council.htm**